SD

# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : **6(136+66+140+08+117)**

**ಸದಸ್ಯರ ಹೆಸರು** : ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಕೆ.ಟಿ.ಶ್ರೀಕಂಠೇಗೌಡ, ಶ್ರೀ ಪುಟ್ಟಣ್ಣ, ಶ್ರೀ ಎಸ್.ವ್ಹಿ.ಸಂಕನೂರ, ಹಾಗೂ ಶ್ರೀ ಅರುಣ ಶಹಾಪುರ

**ಉತ್ತರಿಸುವ ದಿನಾಂಕ** : **13-12-2021**

**ಉತ್ತರಿಸುವ ಸಚಿವರು** : **ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿನ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳ ಸಂಖ್ಯೆ- 2984<br>ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪ್ರೌಢಶಾಲೆಗಳ ಸಂಖ್ಯೆ- 3788<br>ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ - 800 |
| ಆ | ರಾಜ್ಯದ ಖಾಸಗಿ ಅನುದಾನಿತ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಯಾವ ದಿನಾಂಕದವರೆಗೆ ಸರ್ಕಾರವು ಅನುಮತಿ ನೀಡಿದೆ;(ವಿವರ ನೀಡುವುದು) | ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ದಿನಾಂಕ:31.12.2015ರವರೆಗೆ ಅನುಮತಿ ನೀಡಲಾಗಿದೆ.<br><br>ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020 ದಿನಾಂಕ:10.06.2020ರನ್ವಯ ಅನುದಾನಿತ ಪ್ರೌಢಶಾಲೆ/ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡುವಂತಿಲ್ಲ ಎಂದು ಮಿತವ್ಯಯ ಆದೇಶ ಜಾರಿ ಮಾಡಿದ್ದು ಸದರಿ ಆದೇಶವು ಪ್ರಸ್ತುತವು ಜಾರಿಯಲ್ಲಿರುತ್ತದೆ. |
| ಇ | ಕೋವಿಡ್ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಿರುವುದನ್ನು ಹಿಂಪಡೆಯಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳನ್ನು | ಸರ್ಕಾರದ ಪತ್ರ ಸಂಖ್ಯೆ:ಇಪಿ 59 ಎಸ್.ಇ.ಎಸ್ 2020 ದಿನಾಂಕ:05.07.2021ರಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ 257 ಹುದ್ದೆಗಳನ್ನು 2021-22ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ (ಜೂನ್-ಜುಲೈ) ನೇಮಕಾತಿ ಆದೇಶ |

| | | |
|---|---|---|
| | ತುಂಬಿಕೊಳ್ಳಲು ಅನುಮತಿ ನೀಡಲಾಗಿತ್ತು; ಈ ಪೈಕಿ ಇಲ್ಲಿಯವರೆಗೆ ಎಷ್ಟು ಹುದ್ದೆಗಳನ್ನು ತುಂಬಿಕೊಳ್ಳಲಾಗಿದೆ; ಈ ಪ್ರಕ್ರಿಯೆ ಯಾವ ಹಂತದಲ್ಲಿದೆ; ವಿಳಂಬವಾಗಿದ್ದಲ್ಲಿ ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ನೀಡಲು ಸೂಚಿಸಲಾಗಿದೆ. ಬೆಂಗಳೂರು ಆಯುಕ್ತಾಲಯದ ವ್ಯಾಪ್ತಿಯಡಿ ಅನುದಾನಿತ ಪ್ರೌಢಶಾಲೆಗಳ 12 ಸಹ ಶಿಕ್ಷಕರ ಹುದ್ದೆಗಳನ್ನು ನಿಯಮಾನುಸಾರ ಪರಿಶೀಲಿಸಿ ಅನುದಾನಸಹಿತವಾಗಿ ಅನುಮೋದಿಸಲಾಗಿದೆ.<br><br>ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ 173 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾಗಿದೆ. ಇದರಲ್ಲಿ 07 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. 17 ಹುದ್ದೆಗಳ ಆಯ್ಕೆಪಟ್ಟಿಗೆ ಅನುಮತಿ ನೀಡಲಾಗಿದೆ. 20 ಹುದ್ದೆಗಳಿಗೆ ಪ್ರಥಮ ವೇತನ ಬಿಡುಗಡೆ ಮಾಡಲಾಗಿದೆ. |
| ಈ | ಕಳೆದ 2 ವರ್ಷಗಳಿಂದ ಕೋವಿಡ್ ಕಾರಣದಿಂದ ಈ ಸಂಸ್ಥೆಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ತಡೆಹಿಡಿದಿದ್ದರಿಂದ ಅಭ್ಯರ್ಥಿಗಳ ವಯೋಮಿತಿ ಮೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಅಭ್ಯರ್ಥಿಗಳ ನೇಮಕಾತಿಯಲ್ಲಿ 2 ವರ್ಷಗಳ ಕಾಲ ವಯೋಮಿತಿಯನ್ನು ಸಡಿಲಿಕೆ ಮಾಡಲು ಸರ್ಕಾರ ಕ್ರಮ ವಹಿಸುವುದೇ; | ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಉ | 2015ರ ನಂತರ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡುವ ಕುರಿತು ಸರ್ಕಾರದ ನಿಲುವೇನು? | ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:01.012016 ರಿಂದ 31.12.2020ರವರೆಗೆ ನಿವೃತ್ತಿ, ನಿಧನ ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಮೂರು ಆಯುಕ್ತಾಲಯಗಳ ವ್ಯಾಪ್ತಿಯಿಂದ ಮಾಹಿತಿ ಪಡೆದು ಆರ್ಥಿಕ ಇಲಾಖೆಗೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ. |

ಇಪಿ 457 ಎಸ್‌ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು